<u>1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ</u>

<u>S.C.103/2017</u>
<u>S.C.53/2019</u>

ದಿಃ 06.11.2021
(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

Cw-10 Pw-7

ಹೆಸರು : ಮಹೇಶ್
ತಂದೆಯ ಹೆಸರು : ಕನಿಯಪ್ಪ
ವಯಸ್ಸು : 39 ವರ್ಷ
ಉದ್ಯೋಗ : ಚಾಲಕ
ವಾಸಸ್ಥಳ : ತಾವರೆಕೆರೆ,
ಬೆಂಗಳೂರು ದಕ್ಷಿಣ ತಾಲ್ಲೂಕು

<u>ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ</u>

ಸಾಕ್ಷಿದಾರರು ಶವ ಮಹಜರ್ ಮತ್ತು ಅದರಲ್ಲಿರುವ ತಮ್ಮ ಸಹಿಯನ್ನು ಗುರುತಿಸಿದ್ದು, ಅವುಗಳನ್ನು ನಿ.ಪಿ.12 ಮತ್ತು 12(ಎ) ಎಂದು ಗುರುತಿಸಲಾಯಿತು. ಈ ಸಹಿಯನ್ನು ಸುಮಾರು ವರ್ಷಗಳ ಹಿಂದೆ ಆಸ್ಪತ್ರೆಗೆ ಹೋಗಿದ್ದಾಗ ಪೊಲೀಸರು ಪಡೆದಿದ್ದು, ಈ ಪ್ರಕರಣದಲ್ಲಿನ ಮೃತ ಯಾರು ಮತ್ತು ಆತನಿಗೆ ಏನಾಗಿತ್ತು ಎಂಬುದನ್ನು ನಾನು ಗಮನಿಸಲಿಲ್ಲ. ನಾನು ಪೊಲೀಸರ ಸೂಚನೆಯಂತೆ ಸಹಿ ಮಾಡಿದ್ದೆ. ನಿ.ಪಿ.12ರಲ್ಲಿರುವ ವಿಷಯಗಳು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದಾರೆ. ಅದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ)

ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ

ದಿಃ12.10.2016 ರಂದು ಬೆಳಿಗ್ಗೆ 11.30 ರಿಂದ ಮಧ್ಯಾಹ್ನ 2.30 ರವರೆಗೆ ಮೃತ ನವೀನ್ ಕುಮಾರ್‌ರವರ ಮೃತದೇಹದ ಮರಣೋತ್ತವ ಶವ ಪರೀಕ್ಷೆಯನ್ನು ರಾಜರಾಜೇಶ್ವರಿ ಆಸ್ಪತ್ರೆ, ಬೆಂಗಳೂರಿನಲ್ಲಿ ನನ್ನ ಮತ್ತು ಚಾಸಾ.8, 9 ಮತ್ತು 11 ರಿಂದ 13 ರವರ ಸಮಕ್ಷಮ, ಮೃತನ ದೇಹ ನೋಡಿ ಗಾಯಗಳನ್ನು ಗುರುತಿಸಿ ಅದನ್ನು ಪೊಲೀಸರು ಪರಿಶೀಲಿಸಿ, ನಿ.ಪಿ.12 ರಂತೆ ಶವ ಮಹಜರ್ ಕ್ರಮ ಜರುಗಿಸಿ, ಸ್ಥಳದಲ್ಲಿಯೇ ನಮ್ಮ ಸಹಿ ಪಡೆದರು ಎಂದು ಸೂಚಿಸುವುದು ಸರಿಯಲ್ಲ. ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎನ್ನುವುದು ಸರಿಯಲ್ಲ.

ಪಾಟೀ ಸವಾಲುಃ ಶ್ರೀ. ಕೆ.ವಿ.ಕೆ., ವಕೀಲರಿಂದ ಆರೋಪಿಗಳ ಪರವಾಗಿಃ

ನಿ.ಪಿ.12 ಕ್ಕೆ ನಾನು ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ.
(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಮರುಳಸಿದ್ಧಾರಾಧ್ಯ ಹೆಚ್.ಜೆ)
1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.